ಇಲಾಖೆ / ವಿಷಯ: DEPARTMENT / SUBJECT: ಕೋರ್ಟ್ ವಾರ್ತೆ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ ದಿನಾಂಕ : DATE : 10/05/2019

# ಬಡ್ತಿ ಮೀಸಲು ಕಾಯ್ದೆ: ಇಂದು ಸುಪ್ರೀಂ ತೀರ್ಪು

ನವದೆಹಲಿ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನೌಕರರಿಗೆ ಬಡ್ತಿಯಲ್ಲಿ ನೀಡಿರುವ ಮೀಸಲಾತಿಯನ್ನು ರಕ್ಷಿಸುವ ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮ ಜ್ಯೇಷ್ಠತೆ ವಿಸ್ತರಿಸುವ ಕಾಯ್ದೆಯನ್ನು ಪ್ರಶ್ನಿಸಿ ಸಲ್ಲಿಸಲಾಗಿರುವ ಅರ್ಜಿಗಳ ಬಗ್ಗೆ ಸುಪ್ರೀಂ ಕೋರ್ಟ್ ತನ್ನ ತೀರ್ಪನ್ನು ಶುಕ್ರವಾರ ಪ್ರಕಟಿಸಲಿದೆ. ನ್ಯಾಯಮೂರ್ತಿ ಯು.ಯು.ಲಲಿತ್ ಮತ್ತು ನ್ಯಾ.ಡಿ.ವೈ.ಚಂದ್ರಚೂಡ್ ಅವರ ನ್ಯಾಯಪೀಠ ಕಳೆದ ಮಾರ್ಚ್‌ನಲ್ಲಿ ಪ್ರಕರಣದ ವಿಚಾರಣೆ ಮುಕ್ತಾಯಗೊಳಿಸಿ ತೀರ್ಪು ಕಾಯ್ದಿರಿಸಿತ್ತು. ಪರಿಶಿಷ್ಟರಿಗೆ ಬಡ್ತಿಯಲ್ಲಿ ಮೀಸಲಾತಿ ನೀಡುವುದನ್ನು ರಾಜ್ಯ ಸರ್ಕಾರ ನ್ಯಾಯಾಲಯದಲ್ಲಿ ಸಮರ್ಥಿಸಿಕೊಂಡಿತ್ತು. ಅಲ್ಪಸಂಖ್ಯಾತ, ಹಿಂದುಳಿದ, ಸಾಮಾನ್ಯ ವರ್ಗದ ಸಿಬ್ಬಂದಿ ಬಡ್ತಿಯಲ್ಲಿ ಮೀಸಲಾತಿ ನೀಡುವುದು ಸರಿಯಲ್ಲ ಎಂದು ವಾದಿಸಿದ್ದರು.